14

# ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 62 ಸಿಜಿಎಂ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:19.03.2020.

## ಸುತ್ತೋಲೆ

**ವಿಷಯ:** ಸಚಿವ ಸಂಪುಟದ ತೀರ್ಮಾನದಂತೆ ಕೊರೊನಾ ವೈರಸ್ (COVID-19) ಸೊಂಕನ್ನು ನಿಯಂತ್ರಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು.

***

ರಾಜ್ಯದಲ್ಲಿ ಕೊರೊನಾ ವೈರಸ್ (COVID-19) ಸೊಂಕನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಕೈಗೊಳ್ಳಬಹುದಾದ ಕ್ರಮಗಳ ಕುರಿತು ದಿನಾಂಕ:18.03.2020 ರಂದು ನಡೆದ ವಿಶೇಷ ತುರ್ತು ಸಚಿವ ಸಂಪುಟದ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನಿಸಿದ್ದು, ಸಂಬಂಧಪಟ್ಟ ಇಲಾಖೆಗಳು ಈ ಕೆಳಕಂಡ ಅಂಶಗಳಿಗೆ ಕೂಡಲೇ ಕ್ರಮವಹಿಸುವಂತೆ ಸೂಚಿಸಿದೆ.

1. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಸೇರುವ ಸ್ಥಳಗಳು, ಸಾಮಾಜಿಕ ಕೂಟಗಳಿಗೆ ದಿನಾಂಕ:14.03.2020 ರಿಂದ ವಿಧಿಸಿರುವ ನಿರ್ಬಂಧವನ್ನು ದಿನಾಂಕ:31.03.2020 ರವರೆಗೆ ವಿಸ್ತರಿಸುವುದು.
2. ಜಾತ್ರೆ, ಮದುವೆ ಇತ್ಯಾದಿ ಸಾರ್ವಜನಿಕ ಸಮಾರಂಭಗಳಲ್ಲಿ ಗರಿಷ್ಠ 100 ಜನರಿಗೆ ಮೀರದಂತೆ ಆಚರಿಸಲು ಕ್ರಮ ಜರುಗಿಸುವುದು.
3. ವಿಧಾನಸೌಧ, ವಿಕಾಸಸೌಧ, ಬಹುಮಹಡಿ ಕಟ್ಟಡಗಳು, ವಿಶ್ವೇಶ್ವರಯ್ಯ ಗೋಪುರ, ರಾಜ್ಯ ಉಚ್ಚ ನ್ಯಾಯಾಲಯದ ಕಚೇರಿಗಳಲ್ಲಿ ಸಂದರ್ಶಕರು/ಸಾರ್ವಜನಿಕರು ಭೇಟಿ ನೀಡುವುದನ್ನು ನಿಯಂತ್ರಿಸುವುದು.
4. ಎಲ್ಲಾ ಅಂತರಾಷ್ಟ್ರೀಯ ಪ್ರಯಾಣಿಕರನ್ನು ಪರೀಕ್ಷಿಸಿ, ರೋಗಿಯನ್ನು ಇತರರ ಸಂಪರ್ಕ ಬರದಂತೆ 14 ದಿನಗಳ ಕಾಲ ಪ್ರತ್ಯೇಕವಾಗಿ ಇಡಲು ಹಾಗೂ ಅಂತಹ ಪ್ರಯಾಣಿಕರ ಎಡಗೈ ಅಥವಾ ಬಲಗೈ ಮೇಲೆ ಸ್ಟಾಂಪ್ ಹಾಕುವುದು.
5. ಕೊರೊನಾ ವೈರಸ್ ಸೋಂಕಿತ ರೋಗಿಗಳಿಗೆ ಶುಶ್ರೂಷೆ ನೀಡುತ್ತಿರುವ ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಗೆ, ಆಶಾ ಕಾರ್ಯಕರ್ತೆಯವರಿಗೆ ಮನೋಸ್ಥೈರ್ಯ ಹೆಚ್ಚಿಸಲು ಸೂಕ್ತ ಪ್ರೋತ್ಸಾಹ ನೀಡುವುದು.
6. ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಗಳಿಗೆ ಅಗತ್ಯವಿರುವ ಹೆಚ್ಚಿರುವ ಸಿಬ್ಬಂದಿಯನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ 06 ತಿಂಗಳ ಅವಧಿಗೆ ಈ ಕೂಡಲೇ ಹೊರ ಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲು ಅನುಮತಿ ನೀಡಲು;

..2.

7. ಕೊರೊನಾ ವೈರಸ್ (COVID-19)ನ ತಡೆಗೆ ತುರ್ತು ಸ್ಪಂದನೆಗಾಗಿ ರೂ.200 ಕೋಟಿಗಳನ್ನು ರಾಜ್ಯ ಸರ್ಕಾರದಿಂದ ಮೀಸಲಿಡುವುದು.
8. ಹಕ್ಕಿಜ್ವರ, ಮಂಗನ ಕಾಯಿಲೆ, ಹಂದಿ ಜ್ವರದಂತಹ ಸಾಂಕ್ರಾಮಿಕ ಖಾಯಿಲೆಗಳ ನಿಯಂತ್ರಣ ಕುರಿತು ಅಗತ್ಯ ಕ್ರಮ ಜರುಗಿಸುವುದು.

19/3/20

(ಜಾವೇದ್ ಅಖ್ತರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

**ಇವರಿಗೆ:**

ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳಿಗೆ – ಸೂಕ್ತ ಕ್ರಮಕ್ಕಾಗಿ.

**ಪ್ರತಿ:**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಆರೋಗ್ಯ & ಕುಟುಂಬ ಕಲ್ಯಾಣ ಸೇವೆಗಳು, ಆನಂದ್‌ರಾವ್ ವೃತ್ತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
6. ನಿರ್ದೇಶಕರು, ಆರೋಗ್ಯ & ಕುಟುಂಬ ಕಲ್ಯಾಣ ಸೇವೆಗಳು, ಆನಂದ್‌ರಾವ್ ವೃತ್ತ, ಬೆಂಗಳೂರು.
7. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಶಾಂತಿನಗರ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ಮುಖ್ಯ ಕಾರ್ಯದರ್ಶಿಗಳ ಕಛೇರಿ, ವಿಧಾನಸೌಧ, ಬೆಂಗಳೂರು (ಪ್ರಕರಣ ಸಂಖ್ಯೆ:ಸಿ:165/2020).
10. ಶಾಖಾ ರಕ್ಷಾ ಕಡತ / ಬಿಡಿ ಪ್ರತಿ.